ವಿಶೇಷ ಅನುದಾನ ಬಿಡುಗಡೆ

33(237); ಶ್ರೀ ಡಾ॥ ಮಾಲಕರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ಜಿಲ್ಲೆ ರಚನೆಯಾಗಿ 5 ವರ್ಷಗಳೇ ಆದರೂ ಇನ್ನೂ ತೀವ್ರ ಹಿನ್ನಡೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹೊಸ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಕ್ರಮಕೈಗೊಳ್ಳದೇ ಇರಲು ಕಾರಣಗಳೇನು?

ಇ) ಹೊಸ ಜಿಲ್ಲೆ ರಚಿಸಿದ ಸಂದರ್ಭದಲ್ಲಿ ಹಿಂದಿನ ಸರ್ಕಾರ ಯಾದಗಿರಿ ಜಿಲ್ಲೆ ಅಭಿವೃದ್ಧಿಗೆ 300 ಕೋಟಿ ರೂ. ವಿಶೇಷ ಅನುದಾನ ಘೋಷಿಸಿ ಅಲ್ಪ ಹಣ ಬಿಡುಗಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಉಳಿದ ಹಣ ಬಿಡುಗಡೆ ಸರ್ಕಾರ ಕೈಗೊಂಡ ಕ್ರಮಗಳೇನು: ಯಾವಾಗ ಹಣ ಬಿಡುಗಡೆ ಮಾಡಲಾಗುವುದು.

ಉ) ಹಿಂದುಳಿದ ಜಿಲ್ಲೆಗೆ ವಿಶೇಷ ಅನುದಾನ ಬಿಡುಗಡೆ ಮಾಡದೇ ಹೋದಲ್ಲಿ, ಹೊಸ ಜಿಲ್ಲೆ ರಚನೆ ಮಾಡಿದ ಉದ್ದೇಶ ವಿಫಲವಾಗಿ ಜಿಲ್ಲೆ ಹಿಂದುಳಿಯುತ್ತಲೇ ಹೋಗುವುದನ್ನು ಸರ್ಕಾರ ಗಮನಿಸುತ್ತಿದೆಯೇ?

ಶ್ರೀ ಎಸ್.ಆರ್. ಪಾಟೀಲ್ (ಮಾನ್ಯ ಯೋಜನೆ, ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರು)

ಅ) ಸರ್ಕಾರವು ಅನುಚ್ಛೇದ 371 (ಜೆ) ರಡಿ ಹೈದ್ರಾಬಾದ್ ಕರ್ನಾಟಕ ಪ್ರದೇಶವನ್ನು ಹಿಂದುಳಿದ ಪ್ರದೇಶವನ್ನಾಗಿ ಗುರುತಿಸಿ, ಆ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯನ್ನು ರಚಿಸಿದೆ. ಯಾದಗಿರಿ ಜಿಲ್ಲೆಯೂ ಸಹ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಭಾಗವಾಗಿರುತ್ತದೆ.

ಆ) ಅನುಚ್ಛೇದ 371 (ಜೆ)ಯನ್ವಯ ಕ್ರಮವಹಿಸಿದೆ.

ಇ) ಯಾದಗಿರಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರದಿಂದ ರು 50.00 ಕೋಟಿ ವಿಶೇಷ ಅಭಿವೃದ್ಧಿ ಅನುದಾನ ಘೋಷಿಸಲಾಗಿದ್ದು ಅದರಲ್ಲಿ ರು 43.662 ಕೋಟಿ ಬಿಡುಗಡೆಯಾಗಿದೆ. ಇದಲ್ಲದೆ ಜಿಲ್ಲಾ ಪಂಚಾಯತ್ ಅಧಿಕಾರಿಗಳ ವಸತಿ ಗೃಹ ನಿರ್ಮಾಣದ ಸಲುವಾಗಿ ಪ್ರಸಕ್ತ ಸಾಲಿಗೆ ಯಾದಗಿರಿ ಜಿಲ್ಲೆಗೆ ರು 4.75 ಕೋಟಿ ಅನುದಾನವನ್ನು ಒದಗಿಸಲಾಗಿದೆ.

ಈ) ಉಳಿದ ರು 6.338 ಕೋಟಿಗಳನ್ನು ಪ್ರಗತಿಯನ್ನಾಧರಿಸಿ ಬಿಡುಗಡೆ ಮಾಡಲು ಸರ್ಕಾರ ಕ್ರಮವಹಿಸುತ್ತದೆ.

ಉ) ಅನುಚ್ಛೇದ 371 (ಜೆ)ರಡಿ ಸೃಜಿಸಲಾದ ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ನಿರ್ಭಂಧ ರಹಿತ ಅನುದಾನವನ್ನು ಸರ್ಕಾರವು ಆಯವ್ಯಯದಲ್ಲಿ ನಿಗದಿಗೊಳಿಸಲಾಗಿದೆ. ಈ ಅನುದಾನದ ಪೈಕಿ ಕೆಲವೊಂದು ಮಾರ್ಗಸೂಚಿಗಳನ್ನು ಆಧರಿಸಿ ಅನುದಾನವನ್ನು ಎಲ್ಲಾ ಜಿಲ್ಲೆಗೆ ನೀಡಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ ಯಾದಗಿರಿ ಜಿಲ್ಲೆಯ ಅಭಿವೃದ್ಧಿಗೂ ಅಗತ್ಯ ಕ್ರಮ ವಹಿಸಲಾಗಿದೆ.

ಸಂಚಾರಿ ಪೊಲೀಸ್ ಠಾಣೆ ಸ್ಥಾಪನೆ

34(238); ಡಾ॥ ಮಾಲಕರೆಡ್ಡಿ ಎ.ಬಿ (ಯಾದಗಿರಿ)

ಅ) ಯಾದಗಿರಿ ಜಿಲ್ಲಾ ಕೇಂದ್ರವಾಗಿ ನಾಲ್ಕು ವರ್ಷ ಸಮೀಪಿಸುತ್ತಿದ್ದರೂ ನಗರದಲ್ಲಿ ಸಂಚಾರಿ ಪೊಲೀಸರಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸಂಚಾರಿ ಪೊಲೀಸ್ ಠಾಣೆ ಸ್ಥಾಪನೆಗೆ ಹಾಗೂ ಸಂಚಾರಿ ಪೊಲೀಸರ ನೇಮಕಕ್ಕೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

ಇ) ಸಂಚಾರಿ ಪೊಲೀಸ್ ಠಾಣೆ ಸೃಜನೆ ಕುರಿತು ಸ್ಥಳೀಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸಲ್ಲಿಸಿದ ಪ್ರಸ್ತಾವನೆಯು ಯಾವ ಹಂತದಲ್ಲಿದೆ?